## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ : ಗ್ರೀನ್‌ಕೋ ವಿಂಡ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಹಂಚಿಕೆಯಾಗಿರುವ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ: ವೈಶಾಲಿ ಎನರ್ಜಿ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಮರು ವರ್ಗಾಯಿಸಲು ಹಾಗೂ ಸದರಿ 30 ಮೆ.ವ್ಯಾ. ಸಾಮರ್ಥ್ಯವನ್ನು 100 ಮೆ.ವ್ಯಾ.ಗೆ ಹೆಚ್ಚಿಸುವ ಕುರಿತು.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಇಎನ್ 86 ಎನ್‌ಸಿಇ 2009, ದಿನಾಂಕ : 01.02.2010.

2) ಸರ್ಕಾರದ ಆದೇಶ ಸಂಖ್ಯೆ: ಇಎನ್ 141 ಎನ್‌ಸಿಇ 2012, ದಿನಾಂಕ : 05.07.2013.

3) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: ಕೆಆರ್‌ಇಡಿ/08/VEPL-30 MW to 100 MW/ (GWPPL-30 MW)/2014/4232 ದಿನಾಂಕ: 20.10.2014.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ಮೆ : ವೈಶಾಲಿ ಎನರ್ಜಿ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬಿಜಾಪುರ ಜಿಲ್ಲೆಯ ಬಿಜಾಪುರ ತಾಲ್ಲೂಕಿನ ಕಮತಗಿ, ಕಗ್ಗೋಡು, ಹಡಗಲಿ ಮತ್ತು ಶಿವಾಂಗಿ ಗ್ರಾಮಗಳಲ್ಲಿ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಲವೊಂದು ಷರತ್ತಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿತ್ತು. ಸದರಿ 30 ಮೆ.ವ್ಯಾ ಸಾಮರ್ಥ್ಯವನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರದ ಆದೇಶದಲ್ಲಿ ಮೆ : ಗ್ರೀನ್‌ಕೋ ವಿಂಡ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ವರ್ಗಾಯಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು, ಮೆ: ಗ್ರೀನ್‌ಕೋ ವಿಂಡ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಬಿಜಾಪುರ ಜಿಲ್ಲೆಯ ಬಿಜಾಪುರ ತಾಲ್ಲೂಕಿನ ಕಮತಗಿ, ಕಗ್ಗೋಡು, ಹಡಗಲಿ ಮತ್ತು ಶಿವಾಂಗಿ ಗ್ರಾಮಗಳಲ್ಲಿ ಮಂಜೂರಾಗಿರುವ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ: ವೈಶಾಲಿ ಎನರ್ಜಿ ಪ್ರೈವೇಟ್ ಲಿಮಿಟೆಡ್ ರವರಿಗೆ ಮರು ವರ್ಗಾಯಿಸುವಂತೆ ಹಾಗೂ ಸದರಿ 30 ಮೆ.ವ್ಯಾ. ಸಾಮರ್ಥ್ಯವನ್ನು 100 ಮೆ.ವ್ಯಾ.ಗೆ ಹೆಚ್ಚಿಸಲು ಶಿಫಾರಸ್ಸು ಮಾಡಿರುತ್ತಾರೆ. ಈ ಯೋಜನೆಯನ್ನು ದಿನಾಂಕ : 31.01.2016ರೊಳಗಾಗಿ ಅನುಷ್ಠಾನಗೊಳಿಸುವುದಾಗಿ ಹಾಗೂ ಯೋಜನೆಗೆ ಅವಶ್ಯಕವಾದ ಭೂಮಿಯು ಖಾಸಗಿ ಜಮೀನಾಗಿದ್ದು, ಯೋಜನೆಯಿಂದ ಉತ್ಪಾದನೆ ಆಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡಲು/ ಎಸ್ಕಾಂಗಳೊಂದಿಗೆ ಪಿಪಿಎ ಮಾಡಿಕೊಳ್ಳುವುದಾಗಿ ತಿಳಿಸುತ್ತಾ, ವರ್ಗಾವಣೆ ಹಾಗೂ ಸಾಮರ್ಥ್ಯ ಹೆಚ್ಚಳದ ಶುಲ್ಕ ಪಾವತಿಸಿಕೊಂಡಿರುವುದಾಗಿ ವರದಿ ಮಾಡಿರುತ್ತಾರೆ.

ಅಭಿವೃದ್ಧಿದಾರರು ಸರ್ಕಾರಕ್ಕೆ ಸಲ್ಲಿಸಿರುವ ದಿನಾಂಕ : 30.10.2014ರ ಪತ್ರದಲ್ಲಿ ಈಗಾಗಲೇ ತಮ್ಮ ಕಂಪನಿಗೆ ಮಂಜೂರಾಗಿರುವ 30 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ದಿನಾಂಕ : 31.1.2016ರಲ್ಲಿ ಅನುಷ್ಠಾನಗೊಳಿಸುವುದಾಗಿ ಹಾಗೂ ಹೆಚ್ಚಳಗೊಳ್ಳುವ ಸಾಮರ್ಥ್ಯಕ್ಕೆ 3 ವರ್ಷಗಳ ಕಾಲಾವಕಾಶ ನೀಡುವಂತೆ ಕೋರಿದ್ದು, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 212 ಎನ್‌ಸಿಇ 2014,**
**ಬೆಂಗಳೂರು, ದಿನಾಂಕ: 08.01.2015.**

ಮೆ: ಗ್ರೀನ್‌ಕೋ ವಿಂಡ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಬಿಜಾಪುರ ಜಿಲ್ಲೆಯ ಬಿಜಾಪುರ ತಾಲ್ಲೂಕಿನ ಕಮತಗಿ, ಕಗ್ಗೋಡು, ಹಡಗಲಿ ಮತ್ತು ಶಿವಾಂಗಿ ಗ್ರಾಮಗಳಲ್ಲಿ ಮಂಜೂರಾಗಿದ್ದ 30 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ: ವೈಶಾಲಿ ಎನರ್ಜಿ ಪ್ರೈವೇಟ್ ಲಿಮಿಟೆಡ್ ರವರಿಗೆ **ವರ್ಗಾಯಿಸಿದೆ** ಹಾಗೂ ಯೋಜನಾ ಸಾಮರ್ಥ್ಯವನ್ನು 30 ಮೆ.ವ್ಯಾ. ಸಾಮರ್ಥ್ಯದಿಂದ 100 ಮೆ.ವ್ಯಾ.ಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು **ಹೆಚ್ಚಿಸಿ** ಆದೇಶಿಸಲಾಗಿದೆ:-

....2

| Topo sheet No. | Near by villages of the proposed area and district. | Geographical area description of the project | Sanctioned capacity in MW | Enhance-ment proposed in MW | Total capacity (No.of WTGs & rating in kw) |
|---|---|---|---|---|---|
| 47P/13 | Kamathgi, Kaggod, Hadagali, Shivangi, Bijapur District. | It is ground level plain area situated on the SW and West of Shivangi village. The suggested area consists of water bodies gravel waste, stony waste and is completely open terrain. The area as moderate elevation varying from 560 to 600 mtrs. The area is held in the following Geographical Co-ordinates :<br>**Latitude**: 16°45'0" - 16°50'0" N<br>**Longitude**: 75°53'5" - 76°0'0" E<br>**Ridge peaks: 578, 564, 577, 575, 552m Amsl** | 30 MW | 70 MW | 100 MW (50 x 2000 kw) |

1 **ಮೆ: ವೈಶಾಲಿ ಎನರ್ಜಿ ಪ್ರೈವೇಟ್ ಲಿಮಿಟೆಡ್** ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 **ಮೆ: ವೈಶಾಲಿ ಎನರ್ಜಿ ಪ್ರೈವೇಟ್ ಲಿಮಿಟೆಡ್** ರವರು ಯೋಜನೆಯಿಂದ ಉತ್ಪಾದನೆ ಮಾಡುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡಲು/ ಎಸ್ಕಾಂಗಳೊಂದಿಗೆ ಪಿಪಿಎ ಮಾಡಿಕೊಳ್ಳತಕ್ಕದ್ದು.

3 **ಮೆ: ವೈಶಾಲಿ ಎನರ್ಜಿ ಪ್ರೈವೇಟ್ ಲಿಮಿಟೆಡ್** ರವರು 30 ಮೆ.ವ್ಯಾ. ಸಾಮರ್ಥ್ಯದ ಪವನ ಯೋಜನೆಯನ್ನು ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ : ಇಎನ್ 07 ಎನ್‌ಸಿಇ 2011 ದಿನಾಂಕ : 18.7.2011ರಲ್ಲಿ ಪವನ ವಿದ್ಯುತ್ ಯೋಜನೆಯ ಅನುಷ್ಠಾನಕ್ಕೆ ನಿಗಧಿ ಪಡಿಸಿರುವ ಕಾಲಾವಧಿಯಲ್ಲಿ ಅಂದರೆ 2016ರಲ್ಲಿ ಅನುಷ್ಠಾನಗೊಳಿಸತಕ್ಕದ್ದು ಹಾಗೂ ಹೆಚ್ಚಳಗೊಳ್ಳಲಿರುವ 70 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು ಆದೇಶದ ದಿನಾಂಕದಿಂದ 3 ವರ್ಷಗಳ ಅವಧಿಯಲ್ಲಿ ಅನುಷ್ಠಾನಗೊಳಿಸತಕ್ಕದ್ದು.

4 ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

5 ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ಬಿಜಾಪುರ ಜಿಲ್ಲೆ, ಬಿಜಾಪುರ.
8. ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿಜಾಪುರ ಜಿಲ್ಲೆ, ಬಿಜಾಪುರ.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
11. ಮೆ : ಗ್ರೀನ್‌ಕೋ ವಿಂಡ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್, ಸುಟ್ ನಂ.701-702, ಪ್ರೆಸ್ಟೀಜ್ ಮೆರಿಡಿಯನ್-II, ನಂ. 30, ಎಂ.ಜಿ.ರಸ್ತೆ, ಬೆಂಗಳೂರು-560 001.
12. ಮೆ : ವೈಶಾಲಿ ಎನರ್ಜಿ ಪ್ರೈವೇಟ್ ಲಿಮಿಟೆಡ್, ನಂ.66, 4ನೇ 'ಎ' ಅಡ್ಡರಸ್ತೆ, 3ನೇ ಮೇನ್, ಡಾಲರ್ಸ್ ಕಾಲೋನಿ, ಆರ್‌ಎಂವಿ 2ನೇ ಘಟ್ಟ, ಬೆಂಗಳೂರು - 560 094.
13. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.